**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯದಲ್ಲಿ, ತರೀಕೆರೆ.**

**ಸಿ.ಸಿ.995/2023**

ಪಿರ್ಯಾದುದಾರರು ಃ ತರೀಕೆರೆ ಪೊಲೀಸ್

-ವಿರುದ್ಧ-

ಆರೋಪಿ/ತರು ಃ ಚಂದ್ರಾನಾಯ್ಕ

**-ಃದೋಷಾರೋಪಣೆಃ-**

ಶ್ರೀ ವೈದ್ಯ ಶ್ರೀಕಾಂತ್, ಬಿ.ಎಸ್ಸಿ., ಎಲ್.ಎಲ್.ಬಿ., ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ತರೀಕೆರೆ ಆದ ನಾನು ಈ ಕೆಳಗೆ ಕಾಣಿಸಿರುವಃ

ಚಂದ್ರಾನಾಯ್ಕ ಬಿನ್ ಲೇಟ್ ಕಮಲಾನಾಯ್ಕ, 45 ವರ್ಷ,
ಕೂಲಿ ಕೆಲಸ, ವಾಸಃಬೇಲೇನಹಳ್ಳಿ ತಾಂಡ್ಯ, ತರೀಕೆರೆ ತಾಃ

ಆದ ನಿಮ್ಮ ವಿರುದ್ಧ ಈ ಕೆಳಗಿನಂತೆ ಹೊರಿಸಿರುವ ದೋಷಾರೋಪಣೆ ಎಂದರೆಃ

ದಿನಾಂಕಃ16.11.2022 ರಂದು 18-00 ರ ಸಮಯದಲ್ಲಿ ತರೀಕೆರೆ ಪೊಲೀಸ್ ಠಾಣಾ ಸರಹದ್ದಿನ ಬೇಲೇನಹಳ್ಳಿ ತಾಂಡ್ಯದಲ್ಲಿ ಆರೋಪಿಯಾದ ನೀವು ಅಕ್ರಮವಾಗಿ ಯಾವುದೇ ಪರವಾನಗಿ ಇಲ್ಲದೇ ಒಂದು ಬಿಳಿ ಬಣ್ಣದ ಪ್ಲಾಸ್ಟಿಕ್ ಚೀಲದಲ್ಲಿ ರೂ.3337.35 ಮೌಲ್ಯದ 90 ಎಂ ಎಲ್ ನ ಓರಿಜಿನಲ್ ಚಾಯ್ಸ್ ಡೀಲಕ್ಸ್ ವಿಸ್ಕಿಯ 95 ಟೆಟ್ರಾ ಪ್ಯಾಕ್‌ಗಳನ್ನು ಹೊಂದಿ, ಆ ಮೂಲಕ ನೀವು ಕರ್ನಾಟಕ ಅಬಕಾರಿ ಕಾಯ್ದೆ ಕಲಂ.**32** ರ ರೀತ್ಯಾ ಅಪರಾಧಗಳನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಅದೇ ದಿನ, ಅದೇ ಸಮಯ, ಸ್ಥಳ ಹಾಗೂ ವಿಚಾರದಲ್ಲಿ ಆರೋಪಿಯಾದ ನೀವು ಒಂದು ಬಿಳಿ ಬಣ್ಣದ ಪ್ಲಾಸ್ಟಿಕ್ ಚೀಲದಲ್ಲಿ ರೂ.3337.35 ಮೌಲ್ಯದ 90 ಎಂ ಎಲ್ ನ ಓರಿಜಿನಲ್ ಚಾಯ್ಸ್ ಡೀಲಕ್ಸ್ ವಿಸ್ಕಿಯ 95 ಟೆಟ್ರಾ ಪ್ಯಾಕ್ ಗಳನ್ನು ಅಕ್ರಮವಾಗಿ ಇಟ್ಟುಕೊಂಡು ಲಾಭಕ್ಕಾಗಿ ಮಾರಾಟ ಮಾಡುತ್ತಿದ್ದು, ಆ ಮೂಲಕ ನೀವು ಕರ್ನಾಟಕ ಅಬಕಾರಿ ಕಾಯ್ದೆ ಕಲಂ.**34** ರ ರೀತ್ಯಾ ಅಪರಾಧಗಳನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಈ ಆರೋಪಗಳ ಮೇಲೆ ನೀವು ಈ ನ್ಯಾಯಾಲಯದ ಆರೋಪ ವಿಚಾರಣೆಗೆ ಗುರಿಯಾಗತಕ್ಕದ್ದೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ.

ದಿನಾಂಕಃ 13.08.2024

ಸಹಿ/-
(ವೈದ್ಯ ಶ್ರೀಕಾಂತ್)
ಹಿ. ಪ್ರಧಾನ ಪ್ರದನ್ಯಾದಂ, ತರೀಕೆರೆ.

ಪ್ರಃ 1) ನಿಮಗೆ ತಿಳಿಯುವಂತಹ ಭಾಷೆಯಲ್ಲಿ ಓದಿ ಹೇಳಲಾದ ಆರೋಪಣೆಯನ್ನು ನೀವು ಕೇಳಿ ತಿಳಿದುಕೊಂಡಿರುವಿರಾ?
ಉಃ

ಪ್ರಃ 2) ಸದರಿ ಆರೋಪಣೆಗಳನ್ನು ನೀವು ಒಪ್ಪಿಕೊಳ್ಳುತ್ತೀರಾ ಅಥವಾ ನಿರಾಕರಿಸುತ್ತೀರಾ?
ಉಃ

(ಆರೋಪವನ್ನು ಆರೋಪಿತರಿಗೆ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ನಾನೇ ಸ್ವತಃ ಬರೆದುಕೊಂಡಿರುವುದು ನಿಜ ಮತ್ತು ಸತ್ಯವಾಗಿದೆ ಎಂದು ಈ ಮೂಲಕ ದೃಢೀಕರಿಸುತ್ತೇನೆ)

ದಿನಾಂಕಃ

ಸಹಿ/-
ಹಿ. ಪ್ರಧಾನ ಪ್ರ.ದ.ನ್ಯಾ.ದಂ ತರೀಕೆರೆ.

ಆರೋಪಿ/ತರ ಸಹಿಃ